ಅಸಲು ದಾವಾ ಸಂಖ್ಯೆ - 168/2015
ಡಿ.ಡಬ್ಲ್ಯು - 03
ದಿನಾಂಕಃ 03-05-2025
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ. ಎನ್ ಎಸ್ ಪಿ ವಕೀಲರಿಂದಃ**

ಈ ದಾವೆಯಲ್ಲಿ ನಾನು ಸಾಕ್ಷಿಧಾರನಾಗಿದ್ದು, ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಸಾಕ್ಷಿಗೆ ಮೂರು ದಾಖಲೆಗಳನ್ನು ತೋರಿಸಿದ್ದು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯನ್ನು ಈಗಾಗಲೇ ನಿಡಿ-18 ಮತ್ತು 19 ಎಂದು ಗುರುತಿಸಿದ್ದು ಸಾಕ್ಷಿ ಸಹಿಗಳನ್ನು ನಿಡಿ- 18(ಬಿ) ಮತ್ತು 19(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ, ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು